OCTOBER 13, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಕಬ್ಬು ಬೆಳೆಗಾರರಿಗೆ ನ್ಯಾಯಯುತ** ಮತ್ತು ಲಾಭದಾಯಕ ಬೆಲೆ ಸಿಗುವಂತೆ ಖಚಿತಪಡಿಸಿಕೊಂಡು, ರೈತರು ವ್ಯಕ್ತಪಡಿಸಿರುವ ಆತಂಕಗಳನ್ನು ಪರಿಹರಿಸುವ ನಿಟ್ಟಿನಲ್ಲಿ, ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಅವರೊಂದಿಗೆ ಚರ್ಚೆ ನಡೆಸಿರುವುದಾಗಿ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ತಿಳಿಸಿದ್ದಾರೆ. ರಾಜ್ಯದ ರೈತ ಮುಖಂಡರ ಅಭಿಪ್ರಾಯಗಳನ್ನು ಪರಿಗಣಿಸುವಂತೆ ಹಾಗೂ ಕಬ್ಬು ಬೆಳೆಗಾರರ ಹಿತಾಸಕ್ತಿಗಳನ್ನು ರಕ್ಷಿಸುವಂತೆ ಕೇಂದ್ರ ಸರ್ಕಾರವನ್ನು ಕೋರಿರುವುದಾಗಿ ಅವರು ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ.

<><><>

**ಕರ್ನಾಟಕ ರಾಜ್ಯದ ನೂತನ ರಾಜ್ಯಪಾಲರಾಗಿ** ನೇಮಕಗೊಂಡಿರುವ ಹರಿಯಾಣ ಮೂಲದ, ಸ್ನಾತಕೋತ್ತರ ಪದವಿಧರರಾದ ಹಾಗೂ ಐಐಟಿ ರೂರ್ಕಿಯಿಂದ ಪಿ.ಎಚ್.ಡಿ ಪಡೆದಿರುವ, ಡಾಕ್ಟರ ಸುಧಾ ಯಾದವ್ ಅವರಿಗೆ ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ, ಸಂಸದ ಕೋಟ ಶ್ರೀನಿವಾಸ ಪೂಜಾರಿ ಸೇರಿದಂತೆ ಗಣ್ಯರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ. ನಾಡಿನ ಸಮಸ್ತ ಜನತೆಯ ಪರವಾಗಿ ಆತ್ಮೀಯ ಸ್ವಾಗತ ಕೋರಿದ್ದಾರೆ.

<><><>

**ವಿಕಸಿತ ಭಾರತ–ಜಿ ರಾಮ್ ಜಿ,** ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ, ರಾಯಚೂರು ಜಿಲ್ಲೆಯ 179 ಗ್ರಾಮ ಪಂಚಾಯಿತಿಗಳಲ್ಲಿ, ಜುಲೈ 1 ರಿಂದ, 'ವಿಕಸಿತ ಗ್ರಾಮ ಪಂಚಾಯತಿಯಿಂದ, ವಿಕಸಿತ ಭಾರತದೆಡೆಗೆ' ಎಂಬ ಅಭಿಯಾನವನ್ನು ಅನು ಷ್ಠಾನಗೊಳಿಸಲಾಗಿದೆ. ಇದುವರೆಗೆ 21 ಲಕ್ಷದ 61 ಸಾವಿರ ಮಾನವ ದಿನಗಳನ್ನು ಸೃಜಿಸಲಾಗಿದ್ದು, ರಾಜ್ಯದಲ್ಲೇ ಪ್ರಥಮ ಸ್ಥಾನದಲ್ಲಿದೆ. ಈ ಯೋಜನೆಯು, ಗ್ರಾಮೀಣ ಪ್ರದೇಶದ ಕುಟುಂಬಗಳಿಗೆ ಸ್ಥಳೀಯವಾಗಿ ಉದ್ಯೋಗಾವಕಾಶಗಳನ್ನು ಕಲ್ಪಿಸಿ, ಅವರ ಜೀವನೋಪಾಯವನ್ನು ಸುಧಾರಿಸುವ ಹಾಗೂ ಉದ್ಯೋಗ ಅರಸಿ ವಲಸೆ ಹೋಗುವುದನ್ನು ತಡೆಯುವ ಉದ್ದೇಶ ಹೊಂದಿದೆ.

<><><>

**ಅಮೃತ ಭಾರತ ನಿಲ್ದಾಣ** ಯೋಜನೆಯಡಿ, ಭದ್ರಾವತಿ ರೈಲು ನಿಲ್ದಾಣವನ್ನು ಸೇರ್ಪಡೆಗೊಳಿಸಿ, ಮೂಲಸೌಕರ್ಯ ಕಲ್ಪಿಸಬೇಕು. ಪ್ರಸ್ತಾವಿತ ತಾಳಗುಪ್ಪ–ಸಿದ್ದಾಪುರ, ಶಿರಸಿ ಹೊಸ ರೈಲು ಮಾರ್ಗ ಯೋಜನೆಯಡಿ ಸೊರಬವನ್ನು ಸೇರಿಸುವಂತೆ ಶಿವಮೊಗ್ಗ ಸಂಸದ ಬಿ.ವೈ ರಾಘವೇಂದ್ರ, ರೇಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಮನವಿ ಸಲ್ಲಿಸಿದ್ದಾರೆ. ಶಿವಮೊಗ್ಗದಲ್ಲಿ ರೇಲ್ವೆ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವರು ಪಾಲ್ಗೊಂಡಿದ್ದರು.

<><><>

**ಮೈಸೂರು ದಸರಾ ಮಹೋತ್ಸವದ ಅಂಗವಾಗಿ,** ಅರಮನೆ ಆವರಣದಲ್ಲಿ ಆಯೋಜಿತ ರಂಗೋಲಿ ಸ್ಪರ್ಧೆಯಲ್ಲಿ, 63 ವರ್ಷ ವಯಸ್ಸಿನ ಮೈಸೂರು ಮೂಲದ ಸರಸಮ್ಮ ಪ್ರಥಮ ಬಹುಮಾನ ಪಡೆದರು. ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ, ಗಾಮಿನಹಳ್ಳಿಯ ಸಾವಿತ್ರಿ ದ್ವಿತೀಯ ಸ್ಥಾನಕ್ಕೆ ಭಾಜನರಾದರು. ಇಂದು ಬೆಳಗ್ಗೆ, ಶಾಸಕ ಟಿ.ಎಸ್ ಶ್ರೀವತ್ಸ ರಂಗೋಲಿ ಸ್ಪರ್ಧೆಗೆ ಚಾಲನೆ ನೀಡಿದರು. ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ 265 ಕ್ಕೂ ಹೆಚ್ಚು ಸ್ಪರ್ಧಿಗಳು ಪಾಲ್ಗೊಂಡಿದ್ದರು.

<><><>

**'ಜನ ಸೇವೆಯಿಂದ, ದೇಶ ಸೇವೆ' ಎಂಬ ಮಂತ್ರದಡಿ, ಜನರ ಏಳಿಗೆಯ ಅಚಲ** ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ 25 ವರ್ಷಗಳ ಪಯಣವನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಪೂರೈಸಿದ್ದಾರೆ. ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ, 'ಪ್ರಧಾನ ಮಂತ್ರಿ ಉಜ್ವಲ ಯೋಜನೆ' ಕುರಿತ ಒಂದು ವರದಿ.. 'ಪ್ರಧಾನ ಮಂತ್ರಿ ಉಜ್ವಲ ಯೋಜನೆ' 2016 ರಲ್ಲಿ ಪ್ರಾರಂಭವಾಯಿತು. ಬಡ ಕುಟುಂಬಗಳ ಮಹಿಳೆಯರಿಗೆ, ಸ್ವಚ್ಛ ಅಡುಗೆ ಇಂಧನವನ್ನು ಪೂರೈಸುವ ಮೂಲಕ ಘನತೆ, ಆರೋಗ್ಯ ಮತ್ತು ಸಮಾನ ಅವಕಾಶ ಕಲ್ಪಿಸುವ ಗುರಿಯನ್ನು ಈ ಯೋಜನೆ ಹೊಂದಿದೆ. 2026 ರ ಮೇ ತಿಂಗಳ ವೇಳೆಗೆ, ಬಡ ಕುಟುಂಬಗಳ ಮಹಿಳೆಯರಿಗೆ, 10 ಕೋಟಿ 5 ಲಕ್ಷಕ್ಕೂ ಅಧಿಕ ಉಚಿತ ಎಲ್‌ಪಿಜಿ ಸಂಪರ್ಕಗಳನ್ನು ಒದಗಿಸಲಾಗಿದೆ. 2025–26 ರ ಆರ್ಥಿಕ ವರ್ಷದಲ್ಲಿ ಮರುಭರ್ತಿ ಸಿಲಿಂಡರ ಬಳಕೆ ಸುಮಾರು 5 ಕ್ಕೆ ಏರಿಕೆಯಾಗಿದೆ. 49 ಕೋಟಿಗೂ ಹೆಚ್ಚು P.M.U.Y ಸಿಲಿಂಡರ್‌ಗಳನ್ನು ವಿತರಿಸಲಾಗಿದೆ.

<><><>

**ಯುವಜನತೆ ಹೆಚ್.ಐ.ವಿ. ಮತ್ತು ಏಡ್ಸ್ ಕುರಿತು** ಜಾಗೃತರಾಗಬೇಕು, ಸೋಂಕಿಗೆ ಒಳಗಾಗದಂತೆ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಂಡು ಆರೋಗ್ಯವಂತ ಜೀವನ ರೂಪಿಸಿಕೊಳ್ಳಬೇಕು ಎಂದು ಚಿತ್ರದುರ್ಗ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಕರೆ ನೀಡಿದ್ದಾರೆ. ನಗರದ ಹೊಳಲ್ಕೆರೆ ರಸ್ತೆಯ ಕನಕ ವೃತ್ತದಲ್ಲಿ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕ ಹಾಗೂ ಆರೋಗ್ಯ ಇಲಾಖೆ ವತಿಯಿಂದ ಆಯೋಜಿತ 'ಜಾಗೃತಿ ಮ್ಯಾರಥಾನ್ ಸ್ಪರ್ಧೆ'ಗೆ ಚಾಲನೆ ನೀಡಿ ಅವರು ಮಾತನಾಡಿದರು.

<><><>

**ಇಂದು, ಚಿತ್ರದುರ್ಗದ ಕೊನೆಯ** ಪಾಳೆಗಾರ, ವೀರ ಮದಕರಿ ನಾಯಕರ ಜಯಂತಿ. ತಾಯ್ನಾಡಿನ ರಕ್ಷಣೆಗಾಗಿ, ಶತ್ರುಗಳ ವಿರುದ್ಧ ಅಂಜದೆ ಹೋರಾಡಿದ ವೀರ ಮದಕರಿ ನಾಯಕರ ಅಪ್ರತಿಮ ಸಾಹಸ, ದೇಶಪ್ರೇಮ ಹಾಗೂ ಸಮಾಜಿಕ ಕಾಳಜಿ ಎಂದೆಂದಿಗೂ ಅಮರ ಎಂದಿರುವ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ, ಗೌರವ ಪೂರ್ವಕ ನಮನಗಳನ್ನು ಸಲ್ಲಿಸಿದ್ದಾರೆ.

<><><>

**ವೀರವನಿತೆ ಕಿತ್ತೂರು ರಾಣಿ ಚನ್ನಮ್ಮ ಅವರ ಶೌರ್ಯ, ಸಾಹಸ ಮತ್ತು** ದೇಶಪ್ರೇಮದ ಸಂದೇಶವನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ಆಯೋಜಿಸಿರುವ ವಿಜಯ ಜ್ಯೋತಿ ಯಾತ್ರೆಗೆ, ವಿಧಾನಸೌಧದ ಪೂರ್ವ ದ್ವಾರದ ಭವ್ಯ ಮೆಟ್ಟಿಲುಗಳ ಮುಂಭಾಗ, ಲೋಕೋಪಯೋಗಿ ಖಾತೆ ಸಚಿವ ಸತೀಶ್ ಜಾರಕಿಹೊಳಿ, ಚಾಲನೆ ನೀಡಿದರು. ಬೆಳಗಾವಿ ಜಿಲ್ಲೆಯ ಕಿತ್ತೂರಿನಲ್ಲಿ, ಇದೇ 23ರಿಂದ 25ರವರೆಗೆ ನಡೆಯಲಿರುವ ಕಿತ್ತೂರು ರಾಣಿ ಚನ್ನಮ್ಮ ಉತ್ಸವದ ಅಂಗವಾಗಿ ವಿಜಯ ಜ್ಯೋತಿ ಯಾತ್ರೆ ಆಯೋಜಿಸಲಾಗಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>